## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 696 |
| ಮಾನ್ಯ ಸದಸ್ಯರ ಹೆಸರು: | ಡಾ: ಎಂ.ಜಿ.ಮುಳೆ (ವಿಧಾನಸಭಾ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ: | 09.03.2026 |
| ಉತ್ತರಿಸುವ ಸಚಿವರು: | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

***

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಹುಮ್ನಾಬಾದ್ ತಾಲ್ಲೂಕಿನ ಘಾಟಬೋರಳ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವಾಗಿ ಮೇಲ್ದರ್ಜೆಗೇರಿಸಲು ಜನಸಂಖ್ಯೆಯ ಮಾನದಂಡದ ಕೊರತೆಯಿದೆ ಎಂದು ತಿಳಿಸಲಾಗಿದೆಯೇ: ಹಾಗಿದ್ದಲ್ಲಿ, ಈ ಭಾಗದ ಭೌಗೋಳಿಕ ವಿಸ್ತೀರ್ಣ ಮತ್ತು ರೋಗಿಗಳ ಹೆಚ್ಚಿನ ಒತ್ತಡವನ್ನು ಪರಿಗಣಿಸಿ ಈ ಮಾನದಂಡವನ್ನು ಸಡಿಲಿಸುವ ಉದ್ದೇಶ ಸರ್ಕಾರದ ಮುಂದಿದೆಯೇ: | ನಿರ್ದೇಶಕರು, ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ, ಇವರಿಂದ ಸ್ವೀಕೃತವಾದ 2027ರ ಜನಸಂಖ್ಯೆ ಮಾಹಿತಿಯನ್ವಯ ಹುಮ್ನಾಬಾದ್ ತಾಲ್ಲೂಕಿನ ಜನಸಂಖ್ಯೆ 2,57,840 ಆಗಿದ್ದು, 02 ಸಮುದಾಯ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸಲು ಅವಕಾಶವಿದೆ. ಪ್ರಸ್ತುತ 03 ಸಮುದಾಯ ಆರೋಗ್ಯ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿದ್ದು, 01 ಸಮುದಾಯ ಕೇಂದ್ರ ಹೆಚ್ಚುವರಿಯಾಗಿ |
| (ಆ) | ಘಾಟಬೋರಳ ಗ್ರಾಮವು ಒಂದು ಪ್ರಮುಖ ಕೇಂದ್ರವಾಗಿದ್ದು, ಸುತ್ತಮುತ್ತಲಿನ ಅನೇಕ ಹಳ್ಳಿಗಳಿಗೆ ಇದೊಂದೇ ಆಧಾರವಾಗಿರುವುದರಿಂದ ಸಾರ್ವಜನಿಕರ ದಶಕಗಳ ಕಾಲದ ಬೇಡಿಕೆಯನ್ನು ಈಡೇರಿಸಲು ಸರ್ಕಾರಕ್ಕಿರುವ ತೊಂದರೆಗಳೇನು: | ಕಾರ್ಯನಿರ್ವಹಿಸುತ್ತಿರುವುದರಿಂದ ಘಾಟಬೋರಳ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವಾಗಿ ಮೇಲ್ದರ್ಜೆಗೇರಿಸಲು ಅವಕಾಶವಿರುವುದಿಲ್ಲ. |
| (ಇ) | ಸದ್ಯಕ್ಕೆ ಸಮುದಾಯ ಆರೋಗ್ಯ ಕೇಂದ್ರವಾಗಿ ಪರಿವರ್ತಿಸಲು ಸಾಧ್ಯವಿಲ್ಲದಿದ್ದಲ್ಲಿ, ಪ್ರಸ್ತುತ ಇರುವ ಘಾಟಬೋರಳ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಹೆಚ್ಚುವರಿ ಹಾಸಿಗೆಗಳು, ತಜ್ಞ ವೈದ್ಯರು ಮತ್ತು ಆಧುನಿಕ ಪ್ರಯೋಗಾಲಯದ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ: | ಘಾಟಬೋರಳ ಪ್ರಾಥಮಿಕ ಆರೋಗ್ಯ ಕೇಂದ್ರ ಪ್ರಸ್ತುತ 06 ಹಾಸಿಗೆಗಳ ಆಸ್ಪತ್ರೆಯಾಗಿ ಕಾರ್ಯ ನಿರ್ವಹಿಸುತ್ತಿದೆ. ಸರ್ಕಾರದ ಆದೇಶ ಸಂಖ್ಯೆ: ಆಕುಕ 98 ಸೆಜಿಇ 2013, ದಿನಾಂಕ: 18.07.2014 ರಲ್ಲಿನ ಮಾರ್ಗಸೂಚಿಗಳನ್ವಯ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ತಜ್ಞ ವೈದ್ಯರನ್ನು ನೇಮಿಸಲು ಅವಕಾಶವಿರುವುದಿಲ್ಲ |
| (ಈ) | ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಗಾಗಿ ಇರುವ ವಿಶೇಷ ಅನುದಾನದ (371 J) ಅಡಿಯಲ್ಲಿ ಅಥವಾ ಕೆ.ಕೆ.ಆರ್.ಡಿ.ಬಿ. (KKRDB) ಮೂಲಕ ಈ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸಲು ಸಾಧ್ಯವಿಲ್ಲವೇ: | ನಿರ್ದೇಶಕರು, ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ, ಇವರಿಂದ ಸ್ವೀಕೃತವಾದ 2027 ರ ಜನಸಂಖ್ಯೆ ಮಾಹಿತಿಯನ್ವಯ ಹುಮ್ನಾಬಾದ್ ತಾಲ್ಲೂಕಿನ ಜನಸಂಖ್ಯೆ 2,57,840 ಆಗಿದ್ದು, 02 ಸಮುದಾಯ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸಲು |
| (ಉ) | ಗಡಿ ಭಾಗದ ಜನರ ಆರೋಗ್ಯ ಹಿತದೃಷ್ಟಿಯಿಂದ ಈ ಕೇಂದ್ರದ ಸಾಮರ್ಥ್ಯವನ್ನು ಹೆಚ್ಚಿಸುವ ಕುರಿತು ಸರ್ಕಾರವು ಯಾವ ನಿರ್ದಿಷ್ಟ ಕಾಲಮಿತಿಯೊಳಗೆ ತೀರ್ಮಾನ ಕೈಗೊಳ್ಳಲಿದೆ? | ಅವಕಾಶವಿದೆ. ಪ್ರಸ್ತುತ 03 ಸಮುದಾಯ ಆರೋಗ್ಯ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿದ್ದು, ಹಾಗೂ 01 ಹೆಚ್ಚುವರಿ ಸಮುದಾಯ ಆರೋಗ್ಯ ಕೇಂದ್ರ ಕಾರ್ಯ ನಿರ್ವಹಿಸುತ್ತಿರುವುದರಿಂದ ಮತ್ತೊಂದು ಸಮುದಾಯ ಕೇಂದ್ರವನ್ನು ಮೇಲ್ದರ್ಜೆಗೇರಿಸಲು ಅವಕಾಶವಿರುವುದಿಲ್ಲ. |

ಆಕುಕ 24 ಎಸ್‌ಬಿವಿ 2026

(ದಿನೇಶ್ ಗುಂಡೂರಾವ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು